# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 128 |
| ಸದಸ್ಯರ ಹೆಸರು | : | ಡಾ|| ಚಂದ್ರಶೇಖರ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ). |
| ಉತ್ತರಿಸಬೇಕಾದ ದಿನಾಂಕ | : | 08.12.2025. |
| ಉತ್ತರಿಸಬೇಕಾದ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಯಾಣ ಕರ್ನಾಟಕ ಭಾಗದ ಸರಕಾರಿ ಪ್ರೌಢಶಾಲೆಯಲ್ಲಿ ಕೆಲಸ ಮಾಡುವ ಶಿಕ್ಷಕರಿಗೆ 02 ವರ್ಷದಿಂದ ಮುಖ್ಯೋಪಾಧ್ಯಯರ ಹುದ್ದೆಗೆ ಬಡ್ತಿ ನೀಡದೇ ಇರುವುದು, ಸರ್ಕಾರದ ಗಮನಕ್ಕೆ ಬಂದಿದೆಯೇ? | ಕಲ್ಯಾಣ ಕರ್ನಾಟಕ ವಿಭಾಗದ ಮುಂಬಡ್ತಿ ಕೋಟಾದಡಿ ಖಾಲಿ ಇರುವ ಸ್ಥಳೀಯ ವೃಂದದ 102 ಹಾಗೂ ಉಳಿಕೆ ಮೂಲ ವೃಂದದ 37 ಗ್ರೂಪ್ ಬಿ ಸರಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಹುದ್ದೆಗಳಿಗೆ ಮುಂಬಡ್ತಿ ನೀಡಲು ದಿನಾಂಕ:01.07.2024 ರಂದು ಇಲಾಖಾ ಮುಂಬಡ್ತಿ ಸಮಿತಿ ಸಭೆ ನಡೆಸಲಾಗಿರುತ್ತದೆ. ಸದರಿ ಸಭೆಯಲ್ಲಿ ನಿರ್ಣಯಿಸಿದಂತೆ, ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಕಲಬುರಗಿ ಇವರ ದಿನಾಂಕ:12.09.2024 ರ ಅಧಿಕೃತ ಜ್ಞಾಪನದಲ್ಲಿ ಒಟ್ಟು 139 ಪ್ರೌಢಶಾಲಾ ಮುಖ್ಯ ಶಿಕ್ಷಕರ ಹುದ್ದೆಗಳಿಗೆ ಈಗಾಗಲೇ ಮುಂಬಡ್ತಿ ನೀಡಲಾಗಿದೆ.<br><br>ಪ್ರೌಢಶಾಲಾ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಹುದ್ದೆಗಳಿಗೆ ಮುಂಬಡ್ತಿಯಲ್ಲಿ ವಿಶೇಷ ಚೇತನರಿಗೆ ಮೀಸಲಾತಿ ಕಲ್ಪಿಸಿದ ಹಿನ್ನೆಲೆಯಲ್ಲಿ, ದಿನಾಂಕ:01.01.2025 ರಲ್ಲಿದ್ದಂತೆ ಸರ್ಕಾರಿ ಪ್ರೌಢಶಾಲಾ ಸಹಶಿಕ್ಷಕರು ಗ್ರೇಡ್-2/ತ್ಸಮಾನ ವೃಂದದ ಜ್ಯೇಷ್ಠತಾ ಪಟ್ಟಿಯನ್ನು ದಿನಾಂಕ:21.11.2025 ರಂದು ಪ್ರಕಟಿಸಲಾಗಿದ್ದು, ಮುಂಬಡ್ತಿ ಕೋಟಾದಡಿ ಖಾಲಿ ಇರುವ ಒಟ್ಟು 89 ಮುಖ್ಯ ಶಿಕ್ಷಕರ ಹುದ್ದೆಗಳಿಗೆ ಮುಂಬಡ್ತಿ ನೀಡುವ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ. |
| ಆ) | ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಬಡ್ತಿ ನೀಡಲಾಗುವುದು ? | |

**ಸಂಖ್ಯೆ: ಇಪಿ 202 ಪಿಟಿಐ 2025**

**(ಎಸ್.ಮಧುಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು